ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನದ ಕುರಿತು.

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

409 (590) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಅನುದಾನದ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಅನುದಾನ ಬಿಡುಗಡೆ ಮಾಡಲು ಕೈಗೊಂಡ ಕ್ರಮಗಳೇನು;

(ಆ) ಕಳೆದ ಮೂರು (3) ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ವರ್ಷವಾರು ಮತ್ತು ಶಾಸಕರುಗಳ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ (3) ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ-ಬಾಗಲಕೋಟೆ ಕ್ಷೇತ್ರಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳಾವುವು; (ಮಾಹಿತಿಯನ್ನು ವರ್ಷವಾರು ಮತ್ತು ಶಾಸಕರ ಕ್ಷೇತ್ರವಾರು ನೀಡುವುದು)

(ಈ) ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ವಿಜಯಪುರ-ಬಾಗಲಕೋಟೆ ಜಿಲ್ಲೆಗಳಲ್ಲಿಯ ಮಾನ್ಯ ಶಾಸಕರುಗಳ ಕ್ಷೇತ್ರಗಳಿಗೆ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ? (ಮಾನ್ಯ ಶಾಸಕರ ಹೆಸರು ಸಹಿತ ಕೈಗೊಂಡ ಕಾಮಗಾರಿಗಳ ವಿವರಗಳನ್ನು ನೀಡುವುದು)